ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಮೂಲಭೂತ ಸೌಕರ್ಯಗಳ ಕೊರತೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1422 (1762) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಮೊರಾರ್ಜಿದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಿಬ್ಬಂದಿಗಳನ್ನು ತುರ್ತಾಗಿ ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?